ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916

ವಿಶ್ವವಿದ್ಯಾನಿಲಯಕಾರ್ಯಸೌಧ
ಕ್ರಾಫರ್ಡ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406
ಮೈಸೂರು–570 005
ದಿನಾಂಕ: 11–09–2023

## ಸುತ್ತೋಲೆ

ವಿಷಯ: ಸೆಪ್ಟೆಂಬರ್ 15ರಂದು ನಡೆಯುವ "ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ದಿನಾಚರಣೆ"ಯನ್ನು ಜಿಲ್ಲೆಯಾದ್ಯಂತ "ಆಂದೋಲನದ ರೀತಿ ಆಚರಿಸುವ" ಕುರಿತು.

ಉಲ್ಲೇಖ: 1) ಸರ್ಕಾರದ ಅಧೀನ ಕಾರ್ಯದರ್ಶಿ–1, ಸಮಾಜ ಕಲ್ಯಾಣ ಇಲಾಖೆ, ಇವರ ಆದೇಶ ಸಂಖ್ಯೆ: ಸಕಇ 09 ಪಕವಿ 2023, ಬೆಂಗಳೂರು 6.9.2023.
2) ದಿ. 7.9.2023ರಂದು ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸದರಿ ದಿನಾಚರಣೆ ಕುರಿತು ನಡೆದ ಪೂರ್ವಭಾವಿ ಸಭೆಯ ನಿರ್ಣಯಗಳು.
3) ಕುಲಸಚಿವರ ಆಪ್ತಸಹಾಯಕರ ಟಿಪ್ಪಣಿ ಸಂಖ್ಯೆ: ಆರ್‌ಪಿ/ಇತರೆ/2022–23 ದಿನಾಂಕ 11–09–2023

-----

**"ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ದಿನಾಚರಣೆ"ಯನ್ನು "ಆಂದೋಲನದ ರೀತಿ ಆಚರಿಸುವ"** ಸಂಬಂಧ ಸರ್ಕಾರದ ಅಧೀನ ಕಾರ್ಯದರ್ಶಿ–1, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಇವರು ಉಲ್ಲೇಖ(1)ರ ಆದೇಶದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ 15.9.2023 ರಂದು ವಿಧಾನಸೌಧದ ಮುಂಭಾಗದಲ್ಲಿ ಆಯೋಜಿಸಲು ನಿರ್ಧರಿಸಲಾಗಿದ್ದು, ಇದರ ಹಿನ್ನೆಲೆಯಲ್ಲಿ ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ 7–9–2023ರಂದು ಪೂರ್ವಭಾವಿ ಸಭೆ ಆಯೋಜಿಸಿ ಜಿಲ್ಲೆಯಾದ್ಯಂತ ಪರಿಣಾಮಕಾರಿಯಾಗಿ ಆಚರಿಸಲು (ಉಲ್ಲೇಖ–2) ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

ಸಂವಿಧಾನದ ಬಗ್ಗೆ ಅರಿವು ಮೂಡಿಸಲು ಹಾಗೂ ಸಂವಿಧಾನದ ಪ್ರಾಮುಖ್ಯತೆಯನ್ನು ತಿಳಿಸುವಲ್ಲಿ ಸಮನ್ವಯಗೊಳಿಸಿ ಹೆಚ್ಚಿನ ಸಂಖ್ಯೆಯಲ್ಲಿ ಸಂವಿಧಾನ ಪೀಠಿಕೆಯನ್ನು ಓದಲು https://thepreamble-swdkar.inರ ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ತಿಳಿಸಿರುತ್ತಾರೆ.

1) ಮೈಸೂರು ವಿಶ್ವವಿದ್ಯಾನಿಲಯಕ್ಕೊಳಪಡುವ ಎಲ್ಲಾ ಅಧ್ಯಯನ ವಿಭಾಗಗಳು / ಸಂಸ್ಥೆಗಳು / ಕೇಂದ್ರಗಳು / ಕಾಲೇಜುಗಳು / ತಾಂತ್ರಿಕ ವಿದ್ಯಾಲಯ / ಕಛೇರಿಗಳು / ಅಧ್ಯಾಪಕ / ಅಧ್ಯಾಪಕೇತರ / ಸಂಶೋಧನಾ ವಿದ್ಯಾರ್ಥಿಗಳು / ಸ್ನಾತಕ, ಸ್ನಾತಕೋತ್ತರ, ಡಿಪ್ಲೊಮಾ ಹಾಗೂ ಇತರೆ ಕೋರ್ಸ್‌ಗಳನ್ನು ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳು / ವಿದ್ಯಾರ್ಥಿ ನಿಲಯಗಳು ಕಡ್ಡಾಯವಾಗಿ ಮೇಲೆ ತಿಳಿಸಿರುವ ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡುವುದು.
2) ದಿನಾಂಕ 15.09.2023ರಂದು ಬೆಳಿಗ್ಗೆ 10.00 ಗಂಟೆಗೆ ಎಲ್ಲಾ ಅಧಿಕಾರಿಗಳು, ಸಂಘ–ಸಂಸ್ಥೆಯ ಪ್ರಮುಖರು, ವಿದ್ಯಾರ್ಥಿಗಳು, ಶಿಕ್ಷಕರು, ಉಪನ್ಯಾಸಕರು, ಪ್ರಾಧ್ಯಾಪಕರುಗಳು, ನಿಲಯಪಾಲಕರು ಮತ್ತು ಪ್ರಾಂಶುಪಾಲರುಗಳು ಆಯಾ ವಿಭಾಗಗಳಲ್ಲಿ ಕಡ್ಡಾಯವಾಗಿ ಸಂವಿಧಾನದ ಪ್ರಸ್ತಾವನೆಯನ್ನು ಓದುವುದು.
3) ಪ್ರಸ್ತಾವನೆಯನ್ನು ಓದುವ ಸಮಯದಲ್ಲಿ ಫೋಟೋ ಹಾಗೂ ವಿಡಿಯೋ ರೆಕಾರ್ಡ್ ಮಾಡಿ ಸಮಾಜ ಕಲ್ಯಾಣ ಇಲಾಖೆಯ ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
4) ಅಂದು ಎಲ್ಲಾ ಸಂಸ್ಥೆಗಳಲ್ಲಿ ಸಡಗರ ಸಂಭ್ರಮದಿಂದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ತಪ್ಪದೇ ಆಚರಿಸುವುದು.

Priority
xxx

12/09/2023

Scanned with OKEN Scanner

5) ಸೆಪ್ಟೆಂಬರ್ 15ರಂದು ಎಲ್ಲಾ ಸರ್ಕಾರಿ ಸಂಸ್ಥೆ ಮತ್ತು ಕಛೇರಿಗಳಲ್ಲಿ ಸಂವಿಧಾನ ಪ್ರಸ್ತಾವನೆಯಲ್ಲಿನ ಅಂಶಗಳು ಎಲ್ಲರಿಗೂ ಕಾಣಿಸುವ ಸ್ಥಳದಲ್ಲಿ ಗೌರವಪೂರ್ವಕವಾಗಿ ಪ್ರದರ್ಶಿಸುವ ಮೂಲಕ ಅರಿವು ಮೂಡಿಸುವುದು.

6) ಪ್ರಜಾಪ್ರಭುತ್ವದ, ಸಂವಿಧಾನ ಪ್ರಸ್ತಾವನೆಯ ಮಹತ್ವದ ಬಗ್ಗೆ ಉಪನ್ಯಾಸವನ್ನು ಸಂಬಂಧಪಟ್ಟ ವಿಭಾಗ/ಸಂಸ್ಥೆ/ಕೇಂದ್ರ/ಕಾಲೇಜುಗಳಲ್ಲಿ ಏರ್ಪಡಿಸಲು ಆಯಾ ವಿಭಾಗದ ಮುಖ್ಯಸ್ಥರುಗಳು ಅಗತ್ಯ ಕ್ರಮಕೈಗೊಳ್ಳುವುದು.

7) ಸಾಧ್ಯವಾದಲ್ಲಿ ಅಂದು ಭಾರತದ ಸಂವಿಧಾನದ ಬಗ್ಗೆ ರಸಪ್ರಶ್ನೆ, ಪ್ರಬಂಧ ಸ್ಪರ್ಧೆ ಮುಂತಾದ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಏರ್ಪಡಿಸುವುದು.

8) ಅಂದು ಎಲ್ಲರೂ ಕಡ್ಡಾಯವಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಕ್ರಮಕೈಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸುವುದು.

ಮೇಲಿನ ವಿಷಯವನ್ನು ತಮ್ಮ ವಿಭಾಗ/ಸಂಸ್ಥೆ/ಕಾಲೇಜುಗಳಲ್ಲಿ ಎಲ್ಲರ ಗಮನಕ್ಕೆ ತಂದು, ಮೇಲ್ಕಂಡ ಎಲ್ಲಾ ಚಟುವಟಿಕೆಗಳನ್ನು ಕೈಗೊಂಡು ಈ ಕುರಿತು ವ್ಯಾಪಕ ಪ್ರಚಾರ ನೀಡುವ ಮೂಲಕ ಅಧ್ಯಾಪಕರು/ ಅಧ್ಯಾಪಕೇತರರು/ ವಿದ್ಯಾರ್ಥಿಗಳು/ ಸಂಶೋಧಕರುಗಳಲ್ಲಿ ಅರಿವು ಮೂಡಿಸಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಮತ್ತು ಕಾರ್ಯಕ್ರಮ ಆಯೋಜಿಸಿದ ಬಗ್ಗೆ https://thepreamble-swdkar.inರ ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿರುವ ಬಗ್ಗೆ ಈ ಕಛೇರಿಗೆ ಮಾಹಿತಿ ಸಲ್ಲಿಸಲು ಸೂಚಿಸಲಾಗಿದೆ.

11/9/2023

ಕುಲಸಚಿವ.

ಕುಲಸಚಿವ
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

ಇವರಿಗೆ:

1. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಮಾನಸಗಂಗೋತ್ರಿ, ಮೈಸೂರು
2. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
3. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
4. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಕಾಲೇಜುಗಳ ಪ್ರಾಂಶುಪಾಲರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
5. ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರು, ಮೈಸೂರು ಜಿಲ್ಲೆ, ಮೈಸೂರು
6. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು

   (4–6) – ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಲು ಅಗತ್ಯ ಕ್ರಮಕೈಗೊಳ್ಳುವುದು.

7. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
8. ಕಾರ್ಯಪಾಲಕ ಅಭಿಯಂತರರು, ವಿ.ವಿ.ತಾಂತ್ರಿಕ ವಿಭಾಗ, ಮಾನಸಗಂಗೋತ್ರಿ, ಮೈಸೂರು
9. ಸಿಸ್ಟಮ್-ಕೋರ್ಡಿನೇಟರ್, ಮಾಹಿತಿ ಮತ್ತು ಸಂವಹನ(ಐಸಿಟಿ), ಗಣಕವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು – **ಸದರಿ ಸುತ್ತೋಲೆಯನ್ನು ವೆಬ್‌ಸೆಟ್‌ನಲ್ಲಿ ಪ್ರಕಟಿಸುವಂತೆ ಕೋರಿದೆ.**
10. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
11. ಮಾನ್ಯ ಕುಲಪತಿ/ ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
12. ಕಛೇರಿ ಪ್ರತಿ.

Scanned with OKEN Scanner

Social Welfare Department

# Certificate
## OF APPRECIATION

This certificate is awarded to

*Department Of Studies In Botany Manas...*

for participating in

**The reading of the**

**Preamble of the Constitution of India**

led by the Chief Minister of Karnataka

on 15th, September, 2023, the International Day of Democracy

organised by the Social Welfare Department.

WORLD BOOK OF RECORDS.

2.3 Crore people registered

Shri. Siddaramaiah
Hon'ble Chief Minister

Shri. D.K Shivakumar
Hon'ble Deputy Chief Minister

Dr. H.C. Mahadevappa
Hon'ble Minister for Social Welfare Department

Scanned with OKEN Scanner

"ನಾವು, ನಮ್ಮ ಕಛೇರಿ / ಸಂಸ್ಥೆಯಲ್ಲಿ ಪ್ರತಿಯೊಬ್ಬರು, ಈ ಮೂಲಕ ನಮ್ಮ ಕೆಲಸ ಮತ್ತು ಜೀವನದಲ್ಲಿ ಸಂವಿಧಾನದ ಪೀಠಿಕೆಯನ್ನು ಅತ್ಯಂತ ಪ್ರಾಮಾಣಿಕವಾಗಿ ಪಾಲಿಸುವಲ್ಲಿ ಬದ್ಧರಾಗಿರಲು ಪ್ರತಿಜ್ಞೆ ಮಾಡುತ್ತೇವೆ"

## ಭಾರತದ ಸಂವಿಧಾನ

### ಪ್ರಸ್ತಾವನೆ

ಭಾರತದ ಜನಗಳಾದ ನಾವು
ಭಾರತವನ್ನು ಒಂದು ಸಾರ್ವಭೌಮ ಸಮಾಜವಾದೀ
ಸರ್ವಧರ್ಮ ಸಮಭಾವದ ಪ್ರಜಾಸತ್ತಾತ್ಮಕ ಗಣರಾಜ್ಯವಾಗಿ
ರಚಿಸಲು ಮತ್ತು ಅದರ ಸಮಸ್ತ ನಾಗರಿಕರಿಗೆ:
ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ:
ವಿಚಾರ, ಅಭಿವ್ಯಕ್ತಿ, ವಿಶ್ವಾಸ, ಧರ್ಮಶ್ರದ್ಧೆ ಮತ್ತು
ಉಪಾಸನಾ ಸ್ವಾತಂತ್ರ್ಯ:
ಸ್ಥಾನಮಾನ ಹಾಗೂ ಅವಕಾಶ ಸಮಾನತೆ
ದೊರೆಯುವಂತೆ ಮಾಡಲು ಮತ್ತು ವ್ಯಕ್ತಿ ಗೌರವವನ್ನು,
ರಾಷ್ಟ್ರದ ಏಕತೆಯನ್ನು ಹಾಗೂ ಅಖಂಡತೆಯನ್ನು ಸುನಿಶ್ಚಿತಗೊಳಿಸಿ ಅವರಲ್ಲಿ
ಭ್ರಾತೃಭಾವನೆಯನ್ನು ವೃದ್ಧಿಗೊಳಿಸಲು
ಶ್ರದ್ಧಾಪೂರ್ವಕ ಸಂಕಲ್ಪ ಮಾಡಿದವರಾಗಿ;
ನಮ್ಮ ಸಂವಿಧಾನ ಸಭೆಯಲ್ಲಿ
1949ನೆಯ ಇಸವಿ ನವೆಂಬರ್ ತಿಂಗಳ ಇಪ್ಪತ್ತಾರನೆಯ ತಾರೀಖಾದ ಈ ದಿವಸ
ಈ ಮೂಲಕ ಈ ಸಂವಿಧಾನವನ್ನು ಅಂಗೀಕರಿಸಿ,
ಅಧಿನಿಯಮಿಸಿ ಅರ್ಪಿಸಿಕೊಂಡಿದ್ದೇವೆ.

# ಕರ್ನಾಟಕ ಸರ್ಕಾರ

## ಸಮಾಜ ಕಲ್ಯಾಣ ಇಲಾಖೆ

"We, each one of us, in this office / Institution, hereby pledge that we will abide by the preamble in our work and life with utmost sincerity"

## THE CONSTITUTION OF INDIA

### PREAMBLE

WE, THE PEOPLE OF INDIA,
having solemnly resolved to constitute India into a
SOVEREIGN SOCIALIST
SECULAR DEMOCRATIC REPUBLIC
and to secure to all its citizens;
JUSTICE, social, economic and political;
LIBERTY of thought, expression,
belief, faith and worship;
EQUALITY of status and of opportunity;
and to promote among them all
FRATERNITY assuring the dignity of the
individual and the unity and
integrity of the Nation;
IN OUR CONSTITUENT ASSEMBLY
this twenty-sixth day of November, 1949, do
HEREBY ADOPT, ENACT AND GIVE TO
OURSELVES THIS CONSTITUTION.

# GOVERNMENT OF KARNATAKA

## Social Welfare Department

Scanned with OKEN Scanner


REDMI NOTE 11 PRO
15/09/2023 10:32




ಸಸ್ಯಶಾಸ್ತ್ರ ಮತ್ತು ಪ್ರಾಣಿಶಾಸ್ತ್ರ
BOTANY AND ZOOLOGY
UNIVERSITY OF MYSORE
DEPARTMENT OF STUDIES IN ZOOLOGY
DROSOPHILA STOCK CENTRE
NATIONAL FACILITY FOR
GENETIC STOCKS OF DROSOPHILA
UNIT ON EVOLUTION AND GENETICS
FUNDED BY


GPS Map Camera
Mysuru, Karnataka, India
8J6C+V9F, Manasa Gangothiri, Mysuru, Karnataka 570006, India
Lat 12.312177°
Long 76.621313°
15/09/23 10:18 AM GMT +05:30
Google


GPS Map Camera
Mysuru, Karnataka, India
8J6C+V9F, Manasa Gangothiri, Mysuru, Karnataka 570006, India
Lat 12.312225°
Long 76.621328°
15/09/23 10:19 AM GMT +05:30
Google


BOTANY AND ZOOLOGY
UNIVERSITY OF MYSORE
DEPARTMENT OF STUDIES IN ZOOLOGY